## ಕರ್ನಾಟಕ ಸರ್ಕಾರ

ಸಂಖ್ಯೆ:ಮಮಅಇ:ನೇಮಕ:20/ಮೇಚಾ/08-09

ನಿರ್ದೇಶಕರ ಹಾಗೂ ಅಧ್ಯಕ್ಷರ ಕಛೇರಿ, ಇಲಾಖಾ
ಆಯ್ಕೆ ಸಮಿತಿ, ಮಹಿಳೆಯರ ಮತ್ತು ಮಕ್ಕಳ
ಅಭಿವೃದ್ಧಿ ಇಲಾಖೆ, 1ನೇ ಮಹಡಿ,ಬಹು
ಮಹಡಿಗಳ ಕಟ್ಟಡ,
ಬೆಂಗಳೂರು -01 ದಿನಾಂಕ:25.05.2009.

### :ಪ್ರಕಟಣೆ:

ವಿಷಯ: ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಖಾಲಿ ಇರುವ 461 ಮಹಿಳಾ ಮೇಲ್ವಿಚಾರಕಿಯರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಕುರಿತಂತೆ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಅಧಿ ಸೂಚನೆ ಸಂಖ್ಯೆ: WCD 324 SJD 2007
ದಿನಾಂಕ:27-5-2008
2. ಈ ಕಛೇರಿಯ ಅಧಿ ಸೂಚನೆ ಸಂಖ್ಯೆ:ಮಮಅಇ: ನೇಮಕ- 22
:ಮೇಚಾ:2008-09 , ದಿನಾಂಕ:27-06-2008

********

ಉಲ್ಲೇಖ(2)ರಲ್ಲಿ ನಮೂದಿಸಿರುವ ಅಧಿಸೂಚನೆಗೆ ಪ್ರತಿಯಾಗಿ ಸ್ವೀಕರಿಸಲಾದ ಅರ್ಜಿಗಳಲ್ಲಿ, ಅಭ್ಯರ್ಥಿಗಳು ನಮೂದಿಸಿರುವ ಮಾಹಿತಿ ಹಾಗೂ ಉಲ್ಲೇಖ(1)ರಲ್ಲಿ ಹೊರಡಿಸಿರುವ ವಿಶೇಷ ನೇಮಕಾತಿ ನಿಯಮಗಳನ್ವಯ ಹುದ್ದೆಗೆ ನಿಗದಿ ಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳು ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ರೂ.7275-13350ರ ವೇತನ ಶ್ರೇಣಿಯ ಮಹಿಳಾ ಮೇಲ್ವಿಚಾರಕಿಯರ ಹುದ್ದೆಗಳಿಗೆ 461 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಅನುಬಂಧ 1,2 ಮತ್ತು 3ರಲ್ಲಿ ಸಿದ್ಧ ಪಡಿಸಿ, ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು - 560 001, ಹಾಗೂ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರ /ಸಹಾಯಕ ನಿರ್ದೇಶಕರ ಕಛೇರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್ :http://www.dwcd.kar.nic.in ನಲ್ಲೂ ಸಹ ಪಡೆಯಬಹುದಾಗಿದೆ. ಈ ಪಟ್ಟಿಯು ತಾತ್ಕಾಲಿಕವಾಗಿದ್ದು ಬದಲಾವಣೆಗೆ ಒಳಪಟ್ಟಿರುತ್ತದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವ ಅಭ್ಯರ್ಥಿಗಳ ಪ್ರವರ್ಗವಾರು ಕೊನೆಯ ಅಭ್ಯರ್ಥಿಯ ಶೇಕಡಾವಾರು ಅಂಕಗಳನ್ನು (ಕಟ್ ಆಫ್ ಪರ್ಸಂಟೇಜ್) ಅನುಬಂಧ - 4ರಲ್ಲಿ ಪ್ರಕಟಿಸಿದೆ.

1. ತಾತ್ಕಾಲಿಕ ಆಯ್ಕೆ ಪಟ್ಟಿ ತಯಾರಿಸಲು ಗಣನೆಗೆ ತೆಗೆದುಕೊಂಡಿರುವ ಅಂಕಗಳ ಮಾನದಂಡ:

1. ಭಾಷಾ ಮತ್ತು ಐಚ್ಛಿಕ ವಿಷಯಗಳನ್ನೊಳಗೊಂಡಂತೆ ವಿಶ್ವವಿದ್ಯಾನಿಲಯದಿಂದ ಪಡೆದ ಪದವಿ ಪರೀಕ್ಷೆಯಲ್ಲಿ ಪಡೆದ ಒಟ್ಟಾರೆ ಅಂಕಗಳು (ಪದವಿಯವರಿಗೆ ಮಾತ್ರ)

$$\frac{\text{ಪದವಿ ಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳು}}{\text{ಪದವಿ ಪರೀಕ್ಷೆಗೆ ನಿಗದಿಪಡಿಸಿರುವ ಗರಿಷ್ಠ ಒಟ್ಟು ಅಂಕಗಳು}} \times 100$$

2. ಶೇಕಡಾವಾರು ಅಂಕಗಳು ಒಂದೇ ಇದ್ದಂತಹ ಅಭ್ಯರ್ಥಿಗಳ ಪೈಕಿ ವಯಸ್ಸಿನಲ್ಲಿ ಹಿರಿಯರಾದ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿದೆ.

3. ಈ ತಾತ್ಕಾಲಿಕ ಆಯ್ಕೆ ಪಟ್ಟಿಯು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿದೆ:-

I. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಂಡ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿ ಪಡೆಯುವ ಹಕ್ಕುಳ್ಳವರಾಗಿರುವುದಿಲ್ಲ.

II. ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದುಕೊಂಡ ಅಂಕಗಳ ಬಗ್ಗೆ ಸಲ್ಲಿಸಿರುವ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿ ಹಾಗೂ ಇತರೆ ಮೀಸಲಾತಿಗೆ ಸಂಬಂಧಿಸಿದಂತೆ ಒದಗಿಸಲಾಗಿರುವ ಜೆರಾಕ್ಸ್ ಪ್ರತಿಗಳ ಆಧಾರದ ಮೇಲೆ ಮಾತ್ರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಈ ಆಯ್ಕೆಯು ಅಭ್ಯರ್ಥಿಗಳ ಮೂಲದಾಖಲಾತಿಗಳ ಪರಿಶೀಲನೆಗೆ ಒಳಪಟ್ಟಿರುತ್ತದೆ. ಪರಿಶೀಲನೆಯ ಸಮಯದಲ್ಲಿ ಮೂಲ ದಾಖಲಾತಿಗಳಲ್ಲಿ ನ್ಯೂನ್ಯತೆಗಳು ಕಂಡು ಬಂದಲ್ಲಿ ಅಂತಹವರನ್ನುಆಯ್ಕೆ ಪಟ್ಟಿಯಿಂದ ಕೈಬಿಡಲಾಗುವುದು.

III. ವಿವಿಧ ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳು ಸಿಂಧುತ್ವ ಪ್ರಮಾಣ ಪತ್ರವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ ಪಡೆದು ಒದಗಿಸತಕ್ಕದ್ದು.

4. ಅಭ್ಯರ್ಥಿಗಳು ಒದಗಿಸಲಾಗಿರುವ ಯಾವುದೇ ಮಾಹಿತಿಯು ತಪ್ಪು ಎಂದು ಕಂಡು ಬಂದಲ್ಲಿ ಅಂತಹವರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳುವ ಹಾಗೂ ಆಯ್ಕೆಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಖಾ ಆಯ್ಕೆ ಸಮಿತಿಯು ಕಾಯ್ದಿರಿಸಿಕೊಂಡಿದೆ. ಸಮಿತಿಯ ತೀರ್ಮಾನವೇಅಂತಿಮವಾಗಿರುತ್ತದೆ.

5. ಕೃಷಿ ವಿಶ್ವ ವಿದ್ಯಾಲಯದ ಹೋಂ ಸೈನ್ಸ್ ಪದವಿಯಲ್ಲಿ (BHsc.,) ಉತ್ತೀರ್ಣರಾಗಿದ್ದು, (CGPA/OGPA) ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವಂತಹ ಅಭ್ಯರ್ಥಿಗಳು ವಿಶ್ವ ವಿದ್ಯಾಲಯದಿಂದ ಪಡೆದ ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿದ ಕೋಷ್ಠಕದ ಪ್ರಮಾಣ ಪತ್ರವನ್ನು ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಪರಿಶೀಲನೆಗೆ ತಪ್ಪದೆ ಒದಗಿಸತಕ್ಕದ್ದು. (CGPA or OGPA Conversion to % of Marks)

6. ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನೆಗೆ ಪ್ರಧಾನ ಕಛೇರಿಯಲ್ಲಿ ಸದಸ್ಯ ಕಾರ್ಯ ದರ್ಶಿಗಳು, ಇಲಾಖಾ ಆಯ್ಕೆ ಸಮಿತಿ, ಇವರ ಮುಂದೆ ಹಾಜರಾಗತಕ್ಕದ್ದು. ತಪ್ಪಿದಲ್ಲಿ ಅಂತಹವರನ್ನು ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಪರಿಶೀಲನೆಗೆ ಹಾಜರಾಗಬೇಕಾದ ದಿನಾಂಕವನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

7. ಪ್ರಕಟಿಸಲಾಗಿರುವ ತಾತ್ಕಾಲಿಕ ಆಯ್ಕೆ ಪಟ್ಟಿ ಬಗ್ಗೆ ಯಾವುದಾದರೂ ಆಕ್ಷೇಪಣೆಯಿದ್ದಲ್ಲಿ ಅಂತಹ ಅಭ್ಯರ್ಥಿಗಳು ತಮ್ಮ ಲಿಖಿತ ಆಕ್ಷೇಪಣೆಗಳನ್ನು ಸಮರ್ಥನೆಯೊಂದಿಗೆ ಸಂಬಂಧಿಸಿದ ಎಲ್ಲಾ ಪೂರಕ ದಾಖಲಾತಿಗಳನ್ನು ಈ ಪ್ರಕಟಣೆಯನ್ನು ಹೊರಡಿಸಲಾದ ದಿನಾಂಕದಿಂದ 30 ದಿನಗಳೊಳಗಾಗಿ ಸದಸ್ಯ, ಸದಸ್ಯ ಕಾರ್ಯದರ್ಶಿಗಳು, ಇಲಾಖಾ ಆಯ್ಕೆ ಸಮಿತಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1ನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು -01, ಇವರಿಗೆ ತಲುಪುವಂತೆ ಮುದ್ದಾಂ ಅಥವಾ ನೊಂದಾಯಿತ ಅಂಚೆ ಸ್ವೀಕೃತಿ ಬಾಕಿಯ ಮೂಲಕ (RPAD) ಮಾತ್ರ ಸಲ್ಲಿಸತಕ್ಕದ್ದು. ನಿಗಧಿತ ದಿನಾಂಕದ ನಂತರ ಬರುವ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

ಸಹಿ/-
(ಸಂಧ್ಯಾ ವೇಣುಗೋಪಾಲ್ ಶರ್ಮಾ)
ನಿರ್ದೇಶಕರು ಹಾಗೂ ಅಧ್ಯಕ್ಷರು,
ಇಲಾಖಾ ಆಯ್ಕೆ ಸಮಿತಿ,
ಮಹಿಳೆಯರ ಮತ್ತು ಮಕ್ಕಳ
ಅಭಿವೃದ್ಧಿ ಇಲಾಖೆ, ಬೆಂಗಳೂರು.

ಸಹಿ/-
(ಡಿ.ಎಂ.ಶಿವಕುಮಾರ್)
ಜಂಟಿ ನಿರ್ದೇಶಕರು (ಆ)ಹಾಗೂ ಸದಸ್ಯ
ಕಾರ್ಯದರ್ಶಿಗಳು, ಇಲಾಖಾ ಆಯ್ಕೆ ಸಮಿತಿ,
ಮಹಿಳೆಯರ ಮತ್ತು ಮಕ್ಕಳ
ಅಭಿವೃದ್ಧಿ ಇಲಾಖೆ, ಬೆಂಗಳೂರು.